30

<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ॥ ವೈ.ಎ. ನಾರಾಯಣಸ್ವಾಮಿ ಇವರು ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ</u>

<u>ವಿಷಯ:</u>

ಬೆಂಗಳೂರು ಮಹಾನಗರ ಪಾಲಿಕೆಯು ಹೆಬ್ಬಾಳ ಫ್ಲೈಓವರ್ ಕೆಳಗಿನ ರೈಲ್ವೆ ಅಡಿಯಲ್ಲಿ ನಾಗರೀಕರು ಹಾಗೂ ಪಾದಚಾರಿಗಳಿಗಾಗಿ ರೈಲ್ವೆ ಅಂಡರ್-ಬ್ರಿಡ್ಜ್ (ಆರ್.ಯು.ಬಿ) ಯನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಈ ಯೋಜನೆಗೆ ಸುಮಾರು ರೂ.3.50 ಕೋಟಿಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ರೈಲ್ವೆ ಇಲಾಖೆಗೆ ಸಂದಾಯ ಮಾಡಿದ್ದರೂ, ಇದುವರೆವಿಗೂ ಕಾಮಗಾರಿಯನ್ನು ಕೈಗೆತ್ತಿಕೊಳ್ಳದೇ ಇರುವ ವಿಚಾರದ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುತ್ತೇನೆ.

<u>ಉತ್ತರ:</u>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ, ಹೆಬ್ಬಾಳ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಹೆಬ್ಬಾಳ ಫ್ಲೈಓವರ್ ಕೆಳಗಿನ ರೈಲ್ವೆ ಅಡಿಯಲ್ಲಿ ನಾಗರಿಕರು ಹಾಗೂ ಪಾದಾಚಾರಿಗಳಿಗಾಗಿ, ರೈಲ್ವೆ ಅಂಡರ್-ಬ್ರಿಡ್ಜ್ (ಆರ್.ಯು.ಬಿ) ಯನ್ನು ನಿರ್ಮಿಸಲು ರೈಲ್ವೆ ಇಲಾಖೆಯನ್ನು ಕೋರಲಾಗಿ, ನೈರುತ್ಯ ರೈಲ್ವೆ ಇಲಾಖೆಯು ಪಾದಚಾರಿ ಸುರಂಗ ಮಾರ್ಗವನ್ನು ನಿರ್ಮಿಸಲು ರೂ.3.50 ಕೋಟಿಗಳ ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಸದರಿ ಅಂದಾಜು ಮೊತ್ತಕ್ಕೆ ಅನುಗುಣವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ರೂ.2.00 ಕೋಟಿಗಳನ್ನು ನೈರುತ್ಯ ರೈಲ್ವೆ ಇಲಾಖೆಗೆ ಠೇವಣಿ ಮಾಡಲಾಗಿರುತ್ತದೆ.

ಆದರೆ, ಹೆಬ್ಬಾಳ ಮೇಲ್ಸೇತುವೆಗೆ ಮತ್ತೊಂದು "ಹೆಚ್ಚುವರಿ ಪಥ" ವನ್ನು ನಿರ್ಮಾಣ ಮಾಡುವ ಕಾಮಗಾರಿ ಪ್ರಸ್ತಾವನೆ ಅನುಮೋದನೆಗೊಂಡ ಹಿನ್ನೆಲೆಯಲ್ಲಿ, ಪ್ರಸ್ತಾಪಿತ "ಪಾದಚಾರಿ ಮಾರ್ಗ" ನಿರ್ಮಾಣವನ್ನು ನೈರುತ್ಯ ರೈಲ್ವೆ ಇಲಾಖೆಯು ತಡೆಹಿಡಿದ್ದರಿಂದ ವಿಳಂಬವಾಗಿರುತ್ತದೆ".

ಪ್ರಸ್ತುತ, ಹೆಬ್ಬಾಳ ಮೇಲ್ಸೇತುವೆಗೆ ಹೆಚ್ಚುವರಿ ಪಥವನ್ನು ನಿರ್ಮಾಣ ಮಾಡುವ ಕಾಮಗಾರಿಯ ವಿನ್ಯಾಸವನ್ನು ಅಂತಿಮಗೊಳಿಸಲಾಗಿದ್ದು, ಸದರಿ ಹೆಚ್ಚುವರಿ ಪಥವು ಹಾಲಿ ಇರುವ ಮೇಲ್ಸೇತುವೆಗೆ ಹೊಂದಿಕೊಳ್ಳದೇ ಪ್ರತ್ಯೇಕವಾಗಿ **(Dedicated Lane)** ವಿನ್ಯಾಸಗೊಳಿಸಿರುವ ಹಿನ್ನೆಲೆಯಲ್ಲಿ, ಪಾದಚಾರಿ ಸುರಂಗ ಮಾರ್ಗವನ್ನು ಕೈಗೆತ್ತಿಕೊಳ್ಳಲು ಯಾವುದೇ ಅಡೆತಡೆಗಳಿರುವುದಿಲ್ಲವೆಂದು, ರೈಲ್ವೆ ಇಲಾಖೆಯವರಿಗೆ ತಿಳಿಸಲಾಗಿತ್ತು ಹಾಗೂ ನೈರುತ್ಯ ರೈಲ್ವೆ ಇಲಾಖೆ ವತಿಯಿಂದ ಪಾದಚಾರಿ ಸುರಂಗ ಮಾರ್ಗಕ್ಕೆ ಬೇಕಾಗಿರುವ ಪ್ರೀಕ್ಯಾಸ್ಟ್ ಕಾಂಕ್ರೀಟ್ ಜೋಡಣೆಗಳನ್ನು ನಿರ್ಮಿಸಿಕೊಳ್ಳಲಾಗಿತ್ತು.

ಆದರೆ, ಪ್ರಸ್ತುತ ಸದರಿ ರೈಲ್ವೆ ಮಾರ್ಗದಲ್ಲಿ **Sub Urban Railway** ಯೋಜನೆ ಅನುಷ್ಠಾನಗೊಳಿಸಲು ಅನುಮೋದನೆ ದೊರೆತಿರುವುದರಿಂದ, ಪುನಃ ಪಾದಚಾರಿ ಮಾರ್ಗ ನಿರ್ಮಾಣ ಯೋಜನೆಗೆ ಅಡಚಣೆ ಉಂಟಾಗಿದ್ದು, **Sub Urban Railway** ಯೋಜನೆಯ ವಿನ್ಯಾಸ ಅಂತಿಮಗೊಳ್ಳದೇ ಇರುವುದರಿಂದ, ಪಾದಚಾರಿ ಮಾರ್ಗ ನಿರ್ಮಾಣದ ಸ್ಥಳವು ನಿಗದಿಯಾಗದೆ, ಕಾಮಗಾರಿಯನ್ನು ಕೈಗೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ.

..2/-

ಈ ಪಾದಚಾರಿ ಮಾರ್ಗ ನಿರ್ಮಾಣ ಯೋಜನೆಯ ಬಗ್ಗೆ, ನೈರುತ್ಯ ರೈಲ್ವೆ ಇಲಾಖೆಯೊಂದಿಗೆ ಸಮನ್ವಯ ಸಾಧಿಸುತ್ತಿದ್ದು, **Sub Urban Railway** ಯೋಜನಾ ವಿನ್ಯಾಸವನ್ನು ಅಂತಿಮಗೊಳಿಸಿಕೊಂಡು, ಸದರಿ ಯೋಜನೆಗೆ ಅನುಗುಣವಾಗಿ ಪಾದಚಾರಿ ಕೆಳಸೇತುವೆಯನ್ನು ತುರ್ತಾಗಿ ಕೈಗೆತ್ತಿಕೊಳ್ಳುವಂತೆ ರೈಲ್ವೆ ಇಲಾಖೆಯನ್ನು ಕೋರಲಾಗಿರುತ್ತದೆ.

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

**ಸಂಖ್ಯೆ: ನಅಇ 214 ಎಂಎನ್‌ವೈ 2021 (ಇ)**